### ಪ್ರದರ್ಶನ ಕಲೆ, ಶಾಸ್ತ್ರೀಯ ನೃತ್ಯೋತ್ಸವ ರಾಷ್ಟ್ರೀಯ ಸಮ್ಮೇಳನದಲ್ಲಿ ಬಸವರಾಜ್ ಹೊರಟ್ಟಿ

# ಪಾರಂಪರಿಕ ಕಲೆಗಳಿಂದ ಮನುಷ್ಯನಿಗೆ ನೆಮ್ಮದಿ



■ ವಿಜಯಸಾಕ್ಷಿ ಸುದ್ದಿ, ಹಂಪಿ

ಪಾರಂಪರಿಕ ಕಲೆಗಳಾದ ಸಂಗೀತ, ಸಾಹಿತ್ಯ, ಶಿಲ್ಪಕಲೆ, ಚಿತ್ರಕಲೆಗಳು ಮನುಷ್ಯನ ದೈನಂದಿನ ಬದುಕಿನಲ್ಲಿ ಶಾಂತಿ, ನೆಮ್ಮದಿಯನ್ನು ತರುತ್ತವೆ ಎಂದು ಸಭಾಪತಿ ಬಸವರಾಜ ಹೊರಟ್ಟಿ ಅಭಿಪ್ರಾಯಪಟ್ಟರು.

ಭರತ ನೃತ್ಯ ಸಂಗೀತ ಅಕಾಡೆಮಿ ಬೆಂಗಳೂರು ಇವರು ಕನ್ನಡ ವಿಶ್ವವಿದ್ಯಾಲಯ ಹಂಪಿಯ ಸಹಯೋಗದಲ್ಲಿ ಬುಧವಾರ ಆಯೋಜಿಸಿದ್ದ ಪ್ರದರ್ಶನ ಕಲೆ ಮತ್ತು ಶಾಸ್ತ್ರೀಯ ನೃತ್ಯೋತ್ಸವ, ರಾಷ್ಟ್ರೀಯ ಸಮ್ಮೇಳನ ಉದ್ಘಾಟಿಸಿ ಮಾತನಾಡಿದರು.

ಕಲೆ, ಸಂಗೀತ, ಸಾಹಿತ್ಯ ಮನುಷ್ಯನ ಒತ್ತಡವನ್ನು ದೂರ ಮಾಡಿ ನೆಮ್ಮದಿಯಿಂದ ಬಾಳುವಂತೆ ಮಾಡುವ ಶಕ್ತಿ ಹೊಂದಿವೆ. ಮನುಷ್ಯನ ದೈನಂದಿನ ಕೆಲಸ-ಕಾರ್ಯಗಳಲ್ಲಿ ಒತ್ತಡ ಇರುವುದು ಸಹಜ. ಇಂತಹ ಒತ್ತಡಗಳಿಂದ ಮುಕ್ತರಾಗಬೇಕಾದರೆ ಸಂಗೀತ ಕೇಳುವ, ಪಾರಂಪರಿಕ ಕಲೆಗಳನ್ನು ಆಸ್ವಾದಿಸುವ ಹವ್ಯಾಸವನ್ನು ಬೆಳೆಸಿಕೊಳ್ಳಬೇಕು. ಭಾರತೀಯ ಶಾಸ್ತ್ರೀಯ ಸಂಗೀತ, ಶಾಸ್ತ್ರೀಯ ನೃತ್ಯ ಕಲೆಗಳನ್ನು ಹೊರದೇಶದವರು ಅಳವಡಿಸಿಕೊಂಡು ನೆಮ್ಮದಿಯ ಬದುಕನ್ನು ಕಳೆಯುತ್ತಿದ್ದಾರೆ. ಇಂತಹ ಕಲೆಗಳನ್ನು ಉಳಿಸಿ-ಬೆಳೆಸಿಕೊಂಡು ಹೋಗುವ ಹೊಣೆಗಾರಿಕೆ ನಮ್ಮ ಮೇಲಿದೆ. ಇಲ್ಲಿ ಭಾಗವಹಿಸಿರುವ ಉದಯೋನ್ಮುಖ ಕಲಾವಿದರಿಗೆ ಒಳ್ಳೆಯ ಭವಿಷ್ಯ ದೊರೆಯಲಿ ಎಂದು ಹಾರೈಸಿದರು.

ಈ ಸಂದರ್ಭದಲ್ಲಿ ಹಂಪಿ ಕನ್ನಡ ವಿಶ್ವವಿದ್ಯಾಲಯದ ಕುಲಪತಿ ಡಾ. ಡಿ ವಿ ಪರಮಶಿವಮೂರ್ತಿ, ಜಿಂದಾಲ್ ಸ್ಟೀಲ್‌ನ ಉಪಾಧ್ಯಕ್ಷ ಸುನಿಲ್ ರಾಲ್ಫಾ, ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶನ ಕಲೆಗಳ ವಿಶ್ವವಿದ್ಯಾಲಯದ ಕುಲಪತಿ ಡಾ. ನಾಗೇಶ್ ವಿ ಬೆಟ್ಟಕೋಟೆ, ಹಂಪಿ ವಿಶ್ವವಿದ್ಯಾಲಯದ ಕುಲಸಚಿವ ಡಾ. ಸುಬ್ಬಣ್ಣ ರೈ, ಶಿಕ್ಷಣ ತಜ್ಞ ಡಾ.ಬಸವರಾಜ ಧಾರವಾಡ, ನೃತ್ಯ-ಸಂಗೀತ ಅಕಾಡೆಮಿ ಅಧ್ಯಕ್ಷೆ ಶುಭಾರಾಣಿ ಬೋಳಾರ್ ಸೇರಿದಂತೆ ವಿಶ್ವವಿದ್ಯಾಲಯದ ಸಮಸ್ತ ಆಡಳಿತ ವರ್ಗ ಹಾಗೂ ಸಿಬ್ಬಂದಿಗಳು ಭಾಗವಹಿಸಿದ್ದರು.

# ಪಾರಂಪರಿಕ ಕಲೆಗಳು ಮನುಷ್ಯನಿಗೆ ನೆಮ್ಮದಿ ತರುತ್ತವೆ

ಹಂಪಿ: ಪಾರಂಪರಿಕ ಕಲೆಗಳಾದ ಸಂಗೀತ, ಸಾಹಿತ್ಯ, ಶಿಲ್ಪಕಲೆ, ಚಿತ್ರಕಲೆಗಳು ಮನುಷ್ಯನ ದೈನಂದಿನ ಬದುಕಿನಲ್ಲಿ ಶಾಂತಿ ನೆಮ್ಮದಿಯನ್ನು ತರುತ್ತವೆ ಎಂದು ಸಭಾಪತಿ ಬಸವರಾಜ ಹೊರಟ್ಟಿ ಅಭಿಪ್ರಾಯಪಟ್ಟರು.

ಅವರು ಭರತ ನೃತ್ಯ ಸಂಗೀತ ಅಕಾಡೆಮಿ ಬೆಂಗಳೂರು ಇವರು ಕನ್ನಡ ವಿಶ್ವವಿದ್ಯಾಲಯ ಹಂಪಿ ಸಹಯೋಗದೊಂದಿಗೆ ಬುಧವಾರ ಹಂಪಿಯಲ್ಲಿ ಆಯೋಜಿಸಿದ ಎರಡು ದಿನಗಳ ಕಾರ್ಯಕ್ರಮಗಳಾದ ಪ್ರದರ್ಶನ ಕಲೆ ಮತ್ತು ಶಾಸ್ತ್ರೀಯ ನೃತ್ಯೋತ್ಸವ ಹಾಗೂ ರಾಷ್ಟ್ರೀಯ ಸಮ್ಮೇಳನ ಉದ್ಘಾಟಿಸಿ ಮಾತನಾಡಿದರು.

ಕಲೆ ಸಂಗೀತ ಸಾಹಿತ್ಯ ಮನುಷ್ಯನ ಒತ್ತಡವನ್ನು ದೂರು ಮಾಡಿ ನೆಮ್ಮದಿಯಿಂದ ಬಾಳುವಂತೆ ಮಾಡುವ ಶಕ್ತಿ ಇವುಗಳಲ್ಲಿದೆ. ಮನುಷ್ಯನ ದೈನಂದಿನ ಕೆಲಸ ಕಾರ್ಯಗಳಲ್ಲಿ ಒತ್ತಡ ಇರುವುದು ಸಹಜ. ಇಂತಹ ಒತ್ತಡಗಳಿಂದ ಮುಕ್ತರಾಗಬೇಕಾದರೆ ಸಂಗೀತ ಕೇಳುವ ಪಾರಂಪರಿಕ ಕಲೆಗಳನ್ನು ಆಸ್ವಾದಿಸುವ ಹವ್ಯಾಸವನ್ನು ಬೆಳೆಸಿಕೊಳ್ಳಬೇಕು. ಸಂಗೀತಕ್ಕೆ ಹಾಗೂ ಇನ್ನಿತರ ಕಲೆಗಳಿಗೆ ಎಂಥವರನ್ನು ತಲೆಬಾಗಿಸುವ ಶಕ್ತಿ ಹಾಗೂ ನೆಮ್ಮದಿ ಶಾಂತಿ ನೀಡುವ ಶಕ್ತಿ ಅವುಗಳಿಗಿದೆ.



ಭಾರತೀಯ ಶಾಸ್ತ್ರೀಯ ಸಂಗೀತ, ಶಾಸ್ತ್ರೀಯ ನೃತ್ಯ ಕಲೆಗಳನ್ನು, ಯೋಗಗಳನ್ನು ಹೊರದೇಶದವರು ಅಳವಡಿಸಿಕೊಂಡು ನೆಮ್ಮದಿಯ ಬದುಕನ್ನು ಕಳೆಯುತ್ತಿದ್ದಾರೆ. ಇಂತಹ ಕಲೆಗಳನ್ನು ಉಳಿಸಿಕೊಂಡು ಬೆಳೆಸಿಕೊಂಡು ಹೋಗುವ ದೊಡ್ಡ ಹೊಣೆಗಾರಿಕೆ ನಮ್ಮ ಮೇಲಿದೆ. ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದು ನನಗೆ ಸಾಕಷ್ಟು ನೆಮ್ಮದಿ ತಂದಿದೆ. ಇಲ್ಲಿ ಭಾಗವಹಿಸಿರುವ ಉದಯೋನ್ಮುಖ ಕಲಾವಿದರಿಗೆ ಒಳ್ಳೆಯ ಭವಿಷ್ಯ ದೊರೆಯಲಿ ಎಂದು ಹಾರೈಸಿದರು.

ನಾನು ಸಹ ಈ ಕಾರ್ಯಕ್ರಮದಲ್ಲಿ ಭಾಗವಹಿಸುವ ಮುನ್ನ ಸಾಕಷ್ಟು ಒತ್ತಡದಲ್ಲಿದ್ದೆ. ಈಗ ನಿಮ್ಮಗಳ ಮಧ್ಯೆ ಕುಳಿತು ಕೆಲ ಸಮಯ ಕಳೆದಿರುವುದರಿಂದ ನನಗೂ ಸಾಕಷ್ಟು ನೆಮ್ಮದಿ ಶಾಂತಿ ಸಿಕ್ಕಿದೆ. ಅತ್ಯಂತ ಅಭಿಮಾನದಿಂದ ನಾನು ಭಾಗವಹಿಸಿದ್ದೇನೆ ನಿಮಗೆಲ್ಲಾ ಒಳ್ಳೆಯದಾಗಲಿ ಎಂದು ಹಾರೈಸಿದರು. ಈ ಸಂದರ್ಭದಲ್ಲಿ ಹಂಪಿ ಕನ್ನಡ ವಿಶ್ವವಿದ್ಯಾಲಯದ ಕುಲಪತಿ ಡಾ. ಡಿ.ವಿ ಪರಮ ಶಿವಮೂರ್ತಿ, ಜಿಂದಾಲ್ ಸ್ಟೀಲ್‌ನ ಉಪಾಧ್ಯಕ್ಷ ಸುನಿಲ್. ರಾಲ್ಫಾ, ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶನ ಕಲೆಗಳ ವಿಶ್ವವಿದ್ಯಾಲಯದ ಕುಲಪತಿ ಡಾ. ನಾಗೇಶ್ ವಿ. ಬೆಟ್ಟಿನಕೋಟೆ ಹಂಪಿ ವಿಶ್ವವಿದ್ಯಾಲಯದ ಕುಲಸಚಿವ ಡಾ. ಸುಬ್ಬಣ್ಣ ರೈ, ನೃತ್ಯ ಸಂಗೀತ ಅಕಾಡೆಮಿ ಅಧ್ಯಕ್ಷರಾದ ಶುಭಾರಾಣಿ ಬೋಳಾರ್ ಸೇರಿದಂತೆ ಹಂಪಿ ಕನ್ನಡ ವಿಶ್ವವಿದ್ಯಾಲಯದ ಆಡಳಿತ ವರ್ಗ ಹಾಗೂ ಸಿಬ್ಬಂದಿ ಬೇರೆ ಬೇರೆ ರಾಜ್ಯಗಳಿಂದ ಬಂದ ಕಲಾವಿದರು, ಕಲಾಭಿಮಾನಿಗಳು, ಹಿತೈಷಿಗಳು ಭಾಗವಹಿಸಿದ್ದರು ಎಂದು ಡಾ. ಬಸವರಾಜ ಧಾರವಾಡ ತಿಳಿಸಿದ್ದಾರೆ.

## ಪ್ರದರ್ಶನ ಕಲೆ ಮತ್ತು ಶಾಸ್ತ್ರೀಯ ನೃತ್ಯೋತ್ಸವ ಹಾಗೂ ರಾಷ್ಟ್ರೀಯ ಸಮ್ಮೇಳನ

# ಪಾರಂಪರಿಕ ಕಲೆಗಳು ಮನುಷ್ಯನಿಗೆ ನೆಮ್ಮದಿ ತರುತ್ತವೆ



ಹಂಪಿ, ಆ. 10. ಪಾರಂಪರಿಕ ಕಲೆಗಳಾದ ಸಂಗೀತ, ಸಾಹಿತ್ಯ, ಶಿಲ್ಪಕಲೆ, ಚಿತ್ರಕಲೆಗಳು ಮನುಷ್ಯನ ದೈನಂದಿನ ಬದುಕಿನಲ್ಲಿ ಶಾಂತಿ ನೆಮ್ಮದಿಯನ್ನು ತರುತ್ತವೆ ಎಂದು ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ಅವರು ಭರತ ನೃತ್ಯ ಸಂಗೀತ ಅಕಾಡೆಮಿ ಬೆಂಗಳೂರು ಇವರು ವಿಶ್ವವಿದ್ಯಾಲಯ ಹಂಪಿ ರವರ ಸಹಯೋಗದೊಂದಿಗೆ ಬುಧವಾರದಂದು ಹಂಪಿಯಲ್ಲಿ ಆಯೋಜಿಸಿದ ಎರಡು ದಿನಗಳ ಕಾರ್ಯಕ್ರಮಗಳಾದ ಪ್ರದರ್ಶನ ಕಲೆ ಮತ್ತು ಶಾಸ್ತ್ರೀಯ ನೃತ್ಯೋತ್ಸವ ಹಾಗೂ ರಾಷ್ಟ್ರೀಯ ಸಮ್ಮೇಳನ ಉದ್ಘಾಟಿಸಿ ಮಾತನಾಡಿದರು.

ಸಂಗೀತ ಸಾಹಿತ್ಯ ಮನುಷ್ಯನ ಒತ್ತಡವನ್ನು ದೂರು ಮಾಡಿ ನೆಮ್ಮದಿಯಿಂದ ಬಾಳುವಂತೆ ಮಾಡುವ ಶಕ್ತಿ ಇವುಗಳ್ಲಲಿದೆ. ಮನುಷ್ಯನ ದೈನಂದಿನ ಕೆಲಸ ಕಾರ್ಯಗಳಲ್ಲಿ ಒತ್ತಡ ಇರುವುದು ಸಹಜ, ಇಂತಹ ಒತ್ತಡಗಳಿಂದ ಮುಕ್ತರಾಗಬೇಕಾದರೆ ಸಂಗೀತ ಕೇಳುವ ಪಾರಂಪರಿಕ ಆಸ್ವಾದಿಸುವ ಹವ್ಯಾಸವನ್ನು ಬೆಳೆಸಿಕೊಳ್ಳಬೇಕು ಎಂದು ಹೇಳಿದರು.

ಸಂಗೀತಕ್ಕೆ ಹಾಗೂ ಇನ್ನಿತರ ಕಲೆಗಳಿಗೆ ಎಂಥವರನ್ನು ತಲೆಭಾಗಿಸುವ ಶಕ್ತಿ ನೆಮ್ಮದಿ ಶಾಂತಿ ನೀಡುವ ಶಕ್ತಿ ಅವುಗಳಿಗಿದೆ. ಭಾರತೀಯ ಶಾಸ್ತ್ರೀಯ ಸಂಗೀತ ಶಾಸ್ತ್ರೀಯ ನೃತ್ಯ ಕಲೆಗಳನ್ನು ಯೋಗಗಳನ್ನ ಹೊರದೇಶದವರು ಅಳವಡಿಸಿಕೊಂಡು ಬದುಕನ್ನ ಕಳೆಯುತ್ತಿದ್ದಾರೆ. ಇಂತಹ ಕಲೆಗಳನ್ನು ಉಳಿಸಿಕೊಂಡು ಬೆಳೆಸಿಕೊಂಡು ಹೋಗುವ ದೊಡ್ಡ ಹೊಣೆಗಾರಿಕೆ ನಮ್ಮ ಮೇಲಿದೆ. ಇಂದು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದು ನನಗೆ ಸಾಕಷ್ಟು ನೆಮ್ಮದಿ ತಂದಿದೆ. ಇಲ್ಲಿ ಭಾಗವಹಿಸಿರುವ ಉದಯೋನ್ಮುಖ ಕಲಾವಿದರಿಗೆ ಒಳ್ಳೆಯ ದೊರೆಯಲಿ ಎಂದು ಹಾರೈಸಿದರು.

ನಾನು ಸಹ ಈ ಕಾರ್ಯಕ್ರಮದಲ್ಲಿ ಭಾಗವಹಿಸುವ ಮುನ್ನ ಸಾಕಷ್ಟು ಒತ್ತಡದಲ್ಲಿದ್ದೆ. ಈಗ ನಿಮ್ಮಗಳ ಮಧ್ಯೆ ಕುಳಿತು ಕೆಲ ಸಮಯ ಕಳೆದಿರುವುದರಿಂದ ನನಗೂ ಸಾಕಷ್ಟು ನೆಮ್ಮದಿ ಶಾಂತಿ ಸಿಕ್ಕಿದೆ. ಅತ್ಯಂತ ನಾನು ಭಾಗವಹಿಸಿದ್ದೇನೆ ನಿಮಗೆಲ್ಲಾ ಒಳ್ಳೆಯದಾಗಲಿ ಶುಭವಾಗಲಿ ನಿಮ್ಮ ಭವಿಷ್ಯ ಉಜ್ವಲವಾಗಲಿ ಎಂದು ಸಭಾಪತಿ ಬಸವರಾಜ್ ಹೊರಟ್ಟಿ ಅವರು ಹಾರೈಸಿದರು.

ಹಂಪಿ ಕನ್ನಡ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ. ಡಿ.ವಿ ಪರಮ ಶಿವಮೂರ್ತಿ, ಸ್ಕೀಲ್ಸ್ ಉಪಾಧ್ಯಕ್ಷರಾದ ಸುನಿಲ್. ರಾಲ್ಫ್, ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶನ ಕಲೆಗಳ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ. ನಾಗೇಶ್. ವಿ ಬೆಟ್ಟನಕೋಟೆ ಹಂಪಿ ವಿಶ್ವವಿದ್ಯಾಲಯದ ಕುಲ ಸಚಿವರಾದ ಡಾ. ಸುಬ್ಬಣ್ಣ.ರೈ ಸಂಗೀತ ಅಕಾಡೆಮಿ ಅಧ್ಯಕ್ಷರಾದ ಶುಭಾರಾಣಿ ಬೋಳಾರ್ ಸೇರಿದಂತೆ ಹಂಪಿ ಕನ್ನಡ ವಿಶ್ವವಿದ್ಯಾಲಯದ ಸಮಸ್ತ ಆಡಳಿತ ವರ್ಗ ಹಾಗೂ ಸಿಬ್ಬಂದಿ ಸಹ ಸಿಬ್ಬಂದಿ ಬೇರೆ ಬೇರೆ ರಾಜ್ಯಗಳಿಂದ ಬಂದ ಕಲಾವಿದರು, ಕಲಾಭಿಮಾನಿಗಳು, ಹಿತೈಷಿಗಳಿದ್ದರು ಎಂದು ಡಾ.ಬಸವರಾಜ ಧಾರವಾಡ ತಿಳಿಸಿದ್ದಾರೆ.